## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ರಾಮಕೃಷ್ಣ, ಹಿಂದಿನ ಉಪ ಕಾರ್ಯದರ್ಶಿ ಮತ್ತು ಶ್ರೀ ಬಿ.ಎಸ್. ರಾಯಗೇರಿ, ಪತ್ರಾಂಕಿತ ವ್ಯವಸ್ಥಾಪಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಇವರುಗಳ ವಿರುದ್ಧ ಸರ್ಕಾರದ ಹಣವನ್ನು ಸಮರ್ಪಕವಾಗಿ ಬಳಸುವಲ್ಲಿ ಅಡೆತಡೆ ಉಂಟು ಮಾಡಿ ಸರ್ಕಾರಕ್ಕೆ ನಷ್ಟವಾಗಿರುವ ಕುರಿತು ಇವರುಗಳ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಗಳನ್ನು ನೇಮಕ ಮಾಡುವ ಬಗ್ಗೆ ಆದೇಶ.

ಓದಲಾಗಿದೆ: 1) ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ 217 ವಿಸೇಬಿ 2015 ದಿನಾಂಕ 10.05.2016.
2) ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ 217 ವಿಸೇಬಿ 2015 ದಿನಾಂಕ 19.05.2016.
3) ಆಪಾದಿತರ ಲಿಖಿತ ಹೇಳಿಕೆ ದಿನಾಂಕ 26.05.2016 ಮತ್ತು 06.06.2016.

*******

ಪ್ರಸ್ತಾವನೆ:-

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿವಿಧ ಯೋಜನೆಗಳಡಿ ಅಭಿವೃದ್ಧಿ ಕಾರ್ಯಗಳಿಗೆ ಬಿಡುಗಡೆ ಮಾಡಿದ ಸರ್ಕಾರದ ಅನುದಾನವನ್ನು ಕರ್ನಾಟಕ ಆರ್ಥಿಕ ಸಂಹಿತೆ 1958ನ್ನು ಉಲ್ಲಂಘಿಸಿ ವಿವಿಧ ಬ್ಯಾಂಕ್‌ಗಳಲ್ಲಿ ಠೇವಣಿ ಮಾಡಿ, ಗಂಭೀರ ಸ್ವರೂಪದ ಹಣಕಾಸಿನ ಅಶಿಸ್ತು ಎಸಗಿದ್ದು, ಕರ್ತವ್ಯಲೋಪ/ದುರ್ನಡತೆ ಮತ್ತು ಆರ್ಥಿಕ ಅಶಿಸ್ತು ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ. ಆದುದರಿಂದ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಗಳು 1957ರ ನಿಯಮ-11ರಡಿ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾಪಟ್ಟಿಯನ್ನು ಉಲ್ಲೇಖಿತ-(1) ಮತ್ತು (2)ರಲ್ಲಿ ಅನುಕ್ರಮವಾಗಿ ಶ್ರೀ ಬಿ.ಎಸ್.ರಾಯಗೇರಿ, ಪತ್ರಾಂಕಿತ ವ್ಯವಸ್ಥಾಪಕರು ಮತ್ತು ಶ್ರೀ ರಾಮಕೃಷ್ಣ, ಉಪ ಕಾರ್ಯದರ್ಶಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಇವರುಗಳಿಗೆ ಜಾರಿಗೊಳಿಸಲಾಗಿದೆ.

ಸದರಿ ಕಾರಣ ಕೇಳುವ ನೋಟೀಸಿಗೆ ಮೇಲ್ಕಂಡ ಇಬ್ಬರು ಆಪಾದಿತ ಅಧಿಕಾರಿ/ನೌಕರರು ಉಲ್ಲೇಖಿತ-3ರಲ್ಲಿ ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸುತ್ತಾ, ತಮ್ಮ ವಿರುದ್ಧದ ಆರೋಪಗಳನ್ನು ನಿರಾಕರಿಸುತ್ತಾ, ಆರೋಪ ಮುಕ್ತರನ್ನಾಗಿಸಲು ಕೋರಿರುತ್ತಾರೆ. ಆಪಾದಿತರ ಲಿಖಿತ ಹೇಳಿಕೆಯನ್ನು ಸರ್ಕಾರವು ಕೂಲಂಕುಷವಾಗಿ ಪರಿಶೀಲಿಸಿದ್ದು, ಪ್ರಕರಣದಲ್ಲಿ ಸರ್ಕಾರದ ಅನುಧಾನವು ವ್ಯಪಗತವಾಗಲು ಕಾರಣವಾಗಿ ಕರ್ತವ್ಯ ನಿರ್ಲಕ್ಷ್ಯತೆ ತೋರಿರುವ ಗಂಭೀರ ಸ್ವರೂಪದ ಆರೋಪಗಳಾಗಿರುವುದರಿಂದ ಆಪಾದಿತರ ವಿರುದ್ಧ ಮಾಡಲಾದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯುವ ಸಲುವಾಗಿ ಇಲಾಖಾ ವಿಚಾರಣೆಯನ್ನು ನಡೆಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 217 ಪಬವ 2015 ಬೆಂಗಳೂರು, ದಿನಾಂಕ 23.03.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಶ್ರೀ ಬಿ.ಎಸ್.ರಾಯಗೇರಿ, ಪತ್ರಾಂಕಿತ ವ್ಯವಸ್ಥಾಪಕರು ಮತ್ತು ಶ್ರೀ ರಾಮಕೃಷ್ಣ, ಉಪ ಕಾರ್ಯದರ್ಶಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ (ವ.ನಿ.ಮೇ.) ನಿಯಮ-1957ರ ನಿಯಮ-11ರನುಸಾರ ಇಲಾಖಾ ವಿಚಾರಣೆ ನಡೆಸಲು ಆದೇಶಿಸಿದೆ.

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ (ವ.ನಿ.ಮೇ.) ನಿಯಮ-1957ರ ನಿಯಮ-11ರ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಲು ಆದೇ ನಿಯಮಾವಳಿಗಳ ನಿಯಮ-11(2)ರ ಪ್ರಕಾರ ಶ್ರೀ ಬಸವರಾಜ್ ಎಸ್. ತಡಹಾಳ್ (ಬಸವರಾಜ್ ಶಿವಪ್ಪ ತಡಹಾಳ್), ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದೆ.

ಶಿಸ್ತು ಪ್ರಾಧಿಕಾರಿಯ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಯವರ ಮುಂದೆ ಮಂಡಿಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ (ವ.ನಿ.ಮೇ.) ನಿಯಮ-1957ರ ನಿಯಮ-11(5)(ಸಿ)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಸಿದ್ದೇಶ್ ಪೊತಲಕಟ್ಟಿ, ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ-1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ (ವ.ನಿ.ಮೇ.) ನಿಯಮ-1957ರ ನಿಯಮ-11ರಲ್ಲಿ ನಿಗದಿಪಡಿಸಿರುವ ಕಾರ್ಯ ವಿಧಾನದ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಿ, ಪ್ರತಿಯೊಬ್ಬ ಆಪಾದಿತ ಅಧಿಕಾರಿಯ ವಿರುದ್ಧದ ಪ್ರತಿಯೊಂದು ಆರೋಪಗಳು ಸಾಬೀತಾಗಿರುವ/ಸಾಬೀತಾಗಿಲ್ಲದಿರುವ ಬಗ್ಗೆ ಸ್ಪಷ್ಟ ಅಭಿಪ್ರಾಯದೊಂದಿಗೆ ವಿಚಾರಣಾ ವರದಿಯನ್ನು 3 ತಿಂಗಳ ಒಳಗಾಗಿ ಸರ್ಕಾರಕ್ಕೆ ಸಲ್ಲಿಸ ತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳವಾಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸರ್ಕಾರದ ಅಧೀನ ಕಾರ್ಯದರ್ಶಿ, ಸೇವೆಗಳು-ಬಿ & ಸಿ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಇವರು ಕ್ರಮ ಕೈಗೊಳ್ಳತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 42 ಸೇಇವಿ 2014 ದಿನಾಂಕ 08.01.2015ರನ್ವಯ ವಾಹನ ಭತ್ಯೆಯು ಸೇರಿದಂತೆ. ರೂ.15,000/-ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

23/03/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು-ಬಿ & ಸಿ) (ಪ್ರಭಾರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಎ & ಇ)ರವರ ಕಾರ್ಯದರ್ಶಿ, ಕರ್ನಾಟಕ ವೃತ್ತ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:-5329, ಬೆಂಗಳೂರು-560 001.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
3. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
4. ಶ್ರೀ ಬಸವರಾಜ್ ಎಸ್. ತಡಹಾಳ್, ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿಗಳು, ಮನೆ ನಂ.252, "ಜ್ಞಾನ್ವಿ" 22ನೇ ಮೇನ್, ನ್ಯಾಯಾಂಗ ಬಡಾವಣೆ, ಜಿ.ಕೆ.ವಿ.ಕೆ. ಅಂಚೆ, ಬೆಂಗಳೂರು-560 065 (ದೂರವಾಣಿ ಸಂಖ್ಯೆ: 080-28561987 ಮತ್ತು ಮೊಬೈಲ್ ಸಂಖ್ಯೆ: 9880941126).

5. ಶ್ರೀ ಸಿದ್ದೇಶ್ ಪೊತಲಕಟ್ಟಿ, ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ-I), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು (ಮಂಡನಾಧಿಕಾರಿ).
6. ಆಪಾದಿತ ಅಧಿಕಾರಿಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್/ಸರ್ಕಾರದ ಅಧೀನ ಕಾರ್ಯದರ್ಶಿ, ಸೇವೆಗಳು-ಬಿ & ಸಿ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಇವರುಗಳ ಮುಖಾಂತರ).
7. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
9. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.